ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 208 (270)
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 06.12.2023
ಉತ್ತರಿಸುವ ಸಚಿವರು : ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ವಸತಿ ಶಾಲೆಗಳಲ್ಲಿ ದೀರ್ಘಕಾಲದಿಂದ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರದೆ ಇರುವುದರಿಂದ ಅಲ್ಲಿನ ಸಿಬ್ಬಂದಿಗಳ ನೇಮಕಾತಿ ಮತ್ತು ಬಡ್ತಿಗೆ ತುಂಬಾ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಇಲ್ಲ. ಪ್ರಸ್ತುತ ಚಾಲ್ತಿಯಲ್ಲಿರುವ ಇಲಾಖೆಯ 2011ರ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ನೇಮಕಾತಿ ಹಾಗೂ ಬಡ್ತಿ ನೀಡಲಾಗುತ್ತಿದೆ.
ಆ)	ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡದೆ ಎಸ್.ಡಿ.ಎ, ಎಫ್.ಡಿ.ಎ ಮತ್ತು ವಾರ್ಡನ್ ಗಳಿಗೆ 2011ರ ನೇಮಕಾತಿ ನಿಯಮದ ಅಧೀನದಲ್ಲಿ ಮುಂಬಡ್ತಿ ಆದೇಶ ನೀಡಲಾಗಿದೆಯೇ;	ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿ ಚಾಲ್ತಿಯಲ್ಲಿರುವ 2011ರ ವೃಂದ ಮತ್ತು ನೇಮಕಾತಿ ನಿಯಮಾವಳಿಯಂತೆ ಹಾಗೂ ಕಾಲಕಾಲಕ್ಕೆ ಸರ್ಕಾರ ಹೊರಡಿಸುವ ಮಾರ್ಗಸೂಚಿಗಳು/ ಸುತ್ತೋಲೆಗಳನ್ವಯ ಅರ್ಹ ನೌಕರರಿಗೆ ನಿಯಮಾನುಸಾರ ಮುಂಬಡ್ತಿ ನೀಡಲಾಗಿರುತ್ತದೆ.
ಇ)	ಇದರಿಂದ ನಿಯಮಗಳ ಉಲ್ಲಂಘನೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	
ಈ)	'ಎ' ವೃಂದದ ಪ್ರಾಂಶುಪಾಲರ ಹುದ್ದೆಗಳನ್ನು ಹೊಸದಾಗಿ ಸೃಜಿಸದೆ 'ಬಿ' ವೃಂದದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಪ್ರಾಂಶುಪಾಲರನ್ನು ಕಾರ್ಯಕಾರಿ ಆದೇಶದ ಮೂಲಕ 'ಎ' ವೃಂದಕ್ಕೆ ಪದೋನ್ನತಿ ನೀಡಲಾಗಿರುವುದರಿಂದ ಶಿಕ್ಷಕರಿಗೆ, ಉಪನ್ಯಾಸಕರಿಗೆ ಮುಂಬಡ್ತಿಯಲ್ಲಿ ಅನ್ಯಾಯ ಮಾಡಿದಂತಾಗಿಲ್ಲವೇ;	'ಎ' ವೃಂದದ ಪ್ರಾಂಶುಪಾಲರ ಹುದ್ದೆಗಳ ಪದೋನ್ನತಿಗೆ ಸಂಬಂಧಿಸಿದಂತೆ ಪ್ರಸ್ತುತದವರೆಗೂ ಯಾವುದೇ ಕಾರ್ಯಕಾರಿ ಆದೇಶವನ್ನು ಹೊರಡಿಸಿರುವುದಿಲ್ಲ.
ಉ)	ದೈಹಿಕ ಶಿಕ್ಷಣ ಶಿಕ್ಷಕರಿಗೆ ಉನ್ನತೀಕರಿಸಿದ ಶಾಲೆಗಳಲ್ಲಿ ಉಪನ್ಯಾಸಕರ ಹುದ್ದೆಯನ್ನು ಸೃಜಿಸಿ ಮುಂಬಡ್ತಿಗೆ ಅವಕಾಶ ಕಲ್ಪಿಸಲು ಸರ್ಕಾರ ಚಿಂತಿಸುವುದೇ;	ಆದ್ಯತೆ ಹಾಗೂ ಅವಶ್ಯಕತೆಗೆ ಅನುಗುಣವಾಗಿ ಉನ್ನತೀಕರಿಸಿದ ಶಾಲೆಗಳಲ್ಲಿ ಈಗಾಗಲೇ ಹುದ್ದೆಗಳು ಮಂಜೂರಾಗಿರುತ್ತವೆ. ಮುಂದಿನ ದಿನಗಳಲ್ಲಿ ಅವಶ್ಯಕತೆಗೆ ಅನುಗುಣವಾಗಿ ಉಪನ್ಯಾಸಕರ ಹುದ್ದೆಗಳನ್ನು ಸೃಜಿಸುವ ಬಗ್ಗೆ ಪರಿಶೀಲಿಸಲಾಗುವುದು.
ಊ)	ಕಲೆ ಮತ್ತು ಕ್ರಾಫ್ಟ್ ಶಿಕ್ಷಕರಿಗೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಶಿಕ್ಷಕರಿಗೆ ನೀಡುವ ವೇತನಕ್ಕೆ ಸಮಾನವಾದ ವೇತನವನ್ನು ನಿಗದಿಗೊಳಿಸಲು ಸರ್ಕಾರ ಕ್ರಮಕೈಗೊಳ್ಳುವುದೇ?	ಕಲೆ ಮತ್ತು ಕ್ರಾಫ್ಟ್ ಶಿಕ್ಷಕರಿಗೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಶಿಕ್ಷಕರಿಗೆ ನೀಡುವ ವೇತನಕ್ಕೆ ಸಮಾನವಾದ ವೇತನವನ್ನು ನಿಗದಿಗೊಳಿಸುವ ಬಗ್ಗೆ 7ನೇ ರಾಜ್ಯ ವೇತನ ಆಯೋಗದ ಮುಂದೆ ಬೇಡಿಕೆ ಸಲ್ಲಿಸಲಾಗಿರುತ್ತದೆ.

ಸಂಖ್ಯೆ: MWD 103 LMQ 2023

(ಬಿ.ಜೆಡ್. ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು